02

<u>ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ ರವರ ಶೂನ್ಯ ವೇಳೆ ಪ್ರಸ್ತಾವನೆಗಳ ಕ್ರಮ ಸಂಖ್ಯೆ 2 ಕ್ಕೆ ಉತ್ತರಿಸುವ ಬಗ್ಗೆ.</u>

ವಿಷಯ: "9/11 ಅಲೆದಾಟ ತಪ್ಪಿಸಲು ಕ್ರಮಕೈಗೊಳ್ಳಿ ಉಸ್ತುವಾರಿ ರಾಜೀವ್ ಗಾಂಧಿ ಪಂಚಾಯತ್ ರಾಜ್ ಸಂಘಟನೆ ಮನವಿ". ಎಂಬ ಶೀರ್ಷಿಕೆಯಡಿ ದಿನಾಂಕ 07.07.2024ರ ವಿಜಯವಾಣಿ ದಿನ ಪತ್ರಿಕೆಯಲ್ಲಿ ವರದಿಯಾಗಿರುತ್ತದೆ.

ಈ ಹಿಂದೆ ಗ್ರಾಮ ಪಂಚಾಯಿತಿಯಲ್ಲಿ ಈ ಸ್ವತ್ತು ನಮೂನೆ 9/11ಕ್ಕೆ ಸಂಬಂಧಿಸಿದಂತೆ ನೀಡಲಾಗುತ್ತಿದ್ದ ನಿವೇಶನ ವಿನ್ಯಾಸ ನಕ್ಷೆ ಅನುಮೋದನೆಯನ್ನು ಸ್ಥಗಿತಗೊಳಿಸಿರುವುದರಿಂದ, ಸಾರ್ವಜನಿಕರು ಮಂಗಳೂರಿನ ಮೂಡ ಕಚೇರಿಗೆ ಬರಬೇಕಾದ ವಿಚಾರದಲ್ಲಿ ಜನರು ಅನುಭವಿಸುವ ಸಮಸ್ಯೆಗಳ ಬಗ್ಗೆ ರಾಜೀವ್ ಗಾಂಧಿ ಪಂಚಾಯತ್ ರಾಜ್ ಸಂಘಟನೆಯ ಶ್ರೀ ಸುಭಾಶ್ಚಂದ್ರ ಶೆಟ್ಟಿ ಕುಳಾಲು ನೇತೃತ್ವದ ನಿಯೋಗ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ದಿನೇಶ್ ಗುಂಡುರಾವ್ ರವರನ್ನು ಭೇಟಿಯಾಗಿ ಮನವಿ ಸಲ್ಲಿಸಿದೆ.

ಈ ಸ್ವತ್ತು ನಮೂನೆ 9/11 ಪಡೆಯಲು ಗ್ರಾಮೀಣ ಪ್ರದೇಶದ ಜನಸಾಮಾನ್ಯರು ಮಂಗಳೂರಿನ ಮೂಡ ಕಚೇರಿಗೆ ತೆರಳಬೇಕಾಗಿದ್ದು, ದೂರದ ಗ್ರಾಮಸ್ಥರು ಇದಕ್ಕಾಗಿ ದಿನ ಪೂರ್ತಿ ಅಲೆಯಬೇಕಾದ ಅನಿವಾರ್ಯತೆ ಇದೆ. ಇದರ ಜತೆಗೆ ಸಾವಿರಾರು ಕಡತಗಳನ್ನು ವಿಲೇವಾರಿ ಮಾಡುವುದು ಮೂಡ ಸಿಬ್ಬಂದಿಗೂ ಅಸಾಧ್ಯವಾಗಿದ್ದು, ಕಟ್ಟಡ ನಿರ್ಮಾಣ, ಸಾಲ ವ್ಯವಹಾರಕ್ಕೆ ಈ ಸ್ವತ್ತು ನಮೂನೆ 9/11 ಸಕಾಲದಲ್ಲಿ ದೊರೆಯದೆ ಜನ ತೊಂದರೆ ಅನುಭವಿಸುವಂತಾಗಿದೆ. ಈ ಸಂಬಂಧ ಹೈಕೋರ್ಟ್ ನೀಡಿರುವ ಆದೇಶದ ಬಗ್ಗೆ ಸರ್ಕಾರದ ಮಟ್ಟದಲ್ಲಿ ಮಾತುಕತೆ ನಡೆಸಬೇಕೆಂದು ವಿನಂತಿಸಿದ್ದಾರೆ.

ಈ ಹಿಂದೆ ಗ್ರಾಮ ಪಂಚಾಯತಿ ಹಂತದಲ್ಲಿ ನಿವೇಶನ ವಿನ್ಯಾಸ ನಕ್ಷೆಗೆ ಅನುಮೋದನೆಯನ್ನು ನೀಡಲಾಗುತ್ತಿತ್ತು. ಆದರೆ ಇತ್ತೀಚೆಗೆ ಸರ್ಕಾರವು ಈ ಅಧಿಕಾರವನ್ನು ಹಿಂಪಡೆದು ಆದೇಶ ಹೊರಡಿಸಿದೆ. ಇದರಿಂದ ಗ್ರಾಮೀಣ ಭಾಗದಲ್ಲಿ ತೀವ್ರ ತೊಂದರೆಯಾಗಿದೆ.

ಅಧಿವೇಶನದ ಸಂದರ್ಭ ಜಿಲ್ಲಾ ಪ್ರಮುಖರ ನಿಯೋಗ ಬೆಂಗಳೂರಿಗೆ ಬಂದರೆ ಗ್ರಾಮಾಭಿವೃದ್ಧಿ, ನಗರಾಭಿವೃದ್ಧಿ ಹಾಗೂ ಕಂದಾಯ ಇಲಾಖೆಯ ಸಚಿವರೊಂದಿಗೆ ಸಭೆ ಕರೆದು ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸುವುದಾಗಿ ಉಸ್ತುವಾರಿ ಸಚಿವರು ಭರವಸೆ ನೀಡಿದ್ದು, ಗ್ರಾಮೀಣ ಭಾಗದ ಜನರ ಹಿದೃಷ್ಟಿಯಿಂದ ಕೂಡಲೇ ಈ ವಿಷಯದ ಕುರಿತು ಸಂಬಂಧಪಟ್ಟ ಇಲಾಖೆಗಳ ಸಭೆ ಆಯೋಜಿಸಿ ಸಮಸ್ಯೆಗೆ ಪರಿಹಾರ ಒದಗಿಸಿ ಕೊಡಬೇಕೆಂದು, ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮಂತ್ರಿಗಳನ್ನು ಶೂನ್ಯವೇಳೆಯಲ್ಲಿ ಒತ್ತಾಯಿಸಿರುತ್ತಾರೆ.

**ಉತ್ತರ:** ಸ್ಥಳೀಯ ಯೋಜನಾ ಪ್ರದೇಶ ವ್ಯಾಪ್ತಿಯಲ್ಲಿ ವಿನ್ಯಾಸಕ್ಕೆ ಅನುಮೋದನೆ ನೀಡಲು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರಂತೆ ಸಂಬಂಧಿತ ಯೋಜನಾ ಪ್ರಾಧಿಕಾರಗಳು/ನಗರಾಭಿವೃದ್ಧಿ ಪ್ರಾಧಿಕಾರಗಳು ಸಕ್ಷಮ ಪ್ರಾಧಿಕಾರವಾಗಿದ್ದು, ಕಾಯ್ದೆಯ ಅವಕಾಶಗಳಂತೆ ಕಡ್ಡಾಯವಾಗಿ ಪ್ರಾಧಿಕಾರಗಳಿಂದ ವಿನ್ಯಾಸ ಅನುಮೋದನೆ ಪಡೆಯಬೇಕಿರುತ್ತದೆ.

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ (ತಿದ್ದುಪಡಿ) ಕಾಯ್ದೆ, 2021ರ ಕಲಂ 4 ದಿನಾಂಕ:10-07-2021 ರಿಂದ ಜಾರಿಗೆ ಬಂದಿದ್ದು, ಸದರಿ ಕಾಯ್ದೆಯ ಕಲಂ 4-ಕೆ ಅವಕಾಶದಂತೆ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ಗ್ರಾಮದ ಅಭಿವೃದ್ಧಿ ಯೋಜನೆಗಳನ್ನು ಸಿದ್ಧಪಡಿಸುವ ಕುರಿತು ಹಾಗೂ ಸ್ಥಳೀಯ ಯೋಜನಾ ಪ್ರದೇಶವನ್ನು ಹೊರತುಪಡಿಸಿದ ಪ್ರದೇಶಗಳಲ್ಲಿ ಭೂ ಅಭಿವೃದ್ಧಿಗಳಿಗೆ ತಾಂತ್ರಿಕ ಅನುಮೋದನೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ನಿರ್ದೇಶಕರು ಅಥವಾ ಅವರಿಂದ ಅಧಿಕಾರ ನೀಡಲಾದ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಹುದ್ದೆಗೆ ಕಡಿಮೆಯಿಲ್ಲದ ಅಧಿಕಾರಿಯಿಂದ ಕಡ್ಡಾಯವಾಗಿ ಪಡೆಯಬೇಕಾಗಿರುತ್ತದೆ.

ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:19033/2023 ರಲ್ಲಿ ದಿನಾಂಕ: 15-11-2023 ರಂದು ನೀಡಿರುವ ಆದೇಶದಲ್ಲಿ ಯೋಜನಾ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯತಿಯಿಂದ/ನಗರ ಸ್ಥಳೀಯ ಸಂಸ್ಥೆಯಿಂದ ವಿನ್ಯಾಸ ಮಂಜೂರಾಗಿದ್ದು, ಇದು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17 ರಲ್ಲಿ ಕಲ್ಪಿಸಿರುವ ಅವಕಾಶಕ್ಕೆ ವ್ಯತಿರಿಕ್ತವಾಗಿದ್ದು, ಈ ಅನುಮೋದನೆಗಳ ವಿರುದ್ಧ ದೂರು ಸ್ವೀಕರಿಸಿದ ಹಿನ್ನೆಲೆಯಲ್ಲಿ ವಿನ್ಯಾಸ ನಕ್ಷೆ ಮತ್ತು ಖಾತೆಗಳನ್ನು ರದ್ದುಗೊಳಿಸಿ ಆದೇಶಿಸಿದ್ದು, ಇದು ಮೂರನೇ ವ್ಯಕ್ತಿಯ ಖರೀದಿದಾರರ ಹಿತಾಸಕ್ತಿಗಳನ್ನು ಒಳಗೊಂಡಿದ್ದು, ಅನಾವಶ್ಯಕ ವಿವಾದಗಳಿಗೆ ಕಾರಣವಾಗಿರುವುದರಿಂದ ಇಂತಹ ಸಮಸ್ಯೆಗಳನ್ನು ನಿಯಂತ್ರಿಸಲು ರೂಪುರೇಷೆಗಳನ್ನು ರಚಿಸಲು ಸರ್ಕಾರಕ್ಕೆ ಸೂಚಿಸಿರುತ್ತದೆ.

ಸದರಿ ಆದೇಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ಸಂಬಂಧಪಟ್ಟ ಇಲಾಖೆಗಳೊಂದಿಗೆ ನಡೆದ ಸಮಾಲೋಚನಾ ಸಭೆಯ ನಿರ್ಣಯದಂತೆ ಸರ್ಕಾರದ ಆದೇಶ ಸಂಖ್ಯೆ: **ನಅಇ 93 ಎಂಡಬ್ಲ್ಯೂಪಿ 2023(ಭಾ-1), ದಿನಾಂಕ:09-01-2024** ರಲ್ಲಿ *"ಗ್ರಾಮ ಪಂಚಾಯತಿಗಳು/ ನಗರ ಸ್ಥಳೀಯ ಸಂಸ್ಥೆಗಳು ವಿನ್ಯಾಸ ಅನುಮೋದನೆ ನೀಡತಕ್ಕದ್ದಲ್ಲ"* ಎಂದು ಆದೇಶ ಹೊರಡಿಸಲಾಗಿರುತ್ತದೆ. ಪ್ರಸ್ತುತ, ಮಾನ್ಯ ಉಚ್ಚ ನ್ಯಾಯಾಲಯದ ಸೂಚನೆ ಹಿನ್ನೆಲೆಯಲ್ಲಿ, ಸರ್ಕಾರವು ಹೊರಡಿಸಿರುವ ಸದರಿ ಆದೇಶದಂತೆ ಕ್ರಮವಹಿಸಬೇಕಾಗಿರುತ್ತದೆ.

ಈ ಹಿಂದೆ ಸ್ಥಳೀಯ ಯೋಜನಾ ಪ್ರದೇಶ ಘೋಷಣೆಗೊಂಡಿಲ್ಲದೆ ಇರುವ ಗ್ರಾಮ ಪಂಚಾಯತಿ ವ್ಯಾಪ್ತಿಯ ಪ್ರದೇಶಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಕೈಪಿಡಿ ಸಂ. ಗ್ರಾಅಪ 86 ಗ್ರಾಪಂಅ 2014, ದಿನಾಂಕ:11-11-2014 ರನ್ವಯ ಒಂದು ಎಕರೆ ಒಳಗಿನ ವಿಸ್ತೀರ್ಣಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಹಾಗೂ ಒಂದು ಎಕರೆ ಮೇಲ್ಪಟ್ಟ ವಿಸ್ತೀರ್ಣಕ್ಕೆ ನಗರ ಮತ್ತು ಗ್ರಾಮಾಂತರ ಯೋಜನಾ

ಇಲಾಖೆಯಿಂದ ವಿನ್ಯಾಸಕ್ಕೆ ತಾಂತ್ರಿಕ ಅಭಿಪ್ರಾಯ ನೀಡಿ ಸಂಬಂಧಿತ ಸ್ಥಳೀಯ ಸಂಸ್ಥೆಯ ಮುಂದಿನ ಕ್ರಮಕ್ಕೆ ಕಳುಹಿಸಲು ಕ್ರಮವಹಿಸಲಾಗುತ್ತಿತ್ತು. ಸದರಿ ಕೈಪಿಡಿಯ ಪೂರ್ವದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದಲೇ ವಿಸ್ತೀರ್ಣದ ಮಿತಿಯಿಲ್ಲದೆ ವಿನ್ಯಾಸ ಅನುಮೋದನೆಗೆ ಕ್ರಮ ವಹಿಸಲಾಗುತ್ತಿತ್ತು. ಪ್ರಸ್ತುತ ಮಾನ್ಯ ಉಚ್ಛ ನ್ಯಾಯಾಲಯದ ಆದೇಶದ ಹಿನ್ನಲೆಯಲ್ಲಿ, ಸರ್ಕಾರವು ಹೊರಡಿಸಿರುವ ಆದೇಶ ಸಂಖ್ಯೆ. ನಅಇ 93 ಎಂಡಬ್ಲ್ಯೂಪಿ 2023(ಭಾ-1), ದಿನಾಂಕ:09-01-2024 ರನ್ವಯ ವಿನ್ಯಾಸ ಅನುಮೋದನೆಗೆ ವಿಸ್ತೀರ್ಣ ಮಿತಿಯಿಲ್ಲದೆ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದಲೇ ಕ್ರಮ ವಹಿಸಬೇಕಾಗಿರುತ್ತದೆ. ದಿನಾಂಕ:11-11-2014 ರಿಂದ ದಿನಾಂಕ:09-01-2024 ರವರೆಗೆ ಮಾತ್ರ ಒಂದು ಎಕರೆ ಒಳಗಿನ ವಿನ್ಯಾಸಗಳಿಗೆ ಅನುಮೋದನೆ ನೀಡುವ ಅಧಿಕಾರವನ್ನು ಗ್ರಾಮ ಪಂಚಾಯಿತಿಗಳಿಗೆ ನೀಡಲಾಗಿತ್ತು.

ಮುಂದುವರೆದು, ವಿನ್ಯಾಸ ಅನುಮೋದನೆಗೆ ಸಂಬಂಧಿಸಿದಂತೆ, ಅರ್ಜಿದಾರರು ಸಂಬಂಧಿಸಿದ ಸ್ಥಳೀಯ ಸಂಸ್ಥೆಗಳಿಗೆ ಅರ್ಜಿ ಸಲ್ಲಿಸಬೇಕಿದ್ದು, ಸ್ಥಳೀಯ ಸಂಸ್ಥೆಗಳಲ್ಲಿ ತಾಂತ್ರಿಕವಾಗಿ ಪರಿಶೀಲಿಸುವ ಸಿಬ್ಬಂದಿಗಳು ಇಲ್ಲದೇ ಇರುವುದರಿಂದ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಕಲಂ 4-ಕೆ ಅವಕಾಶದಂತೆ ಸ್ಥಳೀಯ ಸಂಸ್ಥೆಗಳು ವಿನ್ಯಾಸ ಅನುಮೋದನೆ ಪ್ರಸ್ತಾವನೆಗಳನ್ನು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಗೆ ಸಲ್ಲಿಸುತ್ತೇವೆ. ಸದರಿ ಪ್ರಸ್ತಾವನೆಗಳನ್ನು ತಾಂತ್ರಿಕವಾಗಿ ಪರಿಶೀಲಿಸಿ ವಿಳಂಬಕ್ಕೆ ಆಸ್ಪದ ಇಲ್ಲದೆ ತ್ವರಿತವಾಗಿ ತಾಂತ್ರಿಕ ಅನುಮೋದನೆ ನೀಡಿ ಸ್ಥಳೀಯ ಸಂಸ್ಥೆಗಳಿಗೆ(ಗ್ರಾಮ ಪಂಚಾಯಿತಿ) ಹಿಂದಿರುಗಿಸಲಾಗುತ್ತಿದ್ದು, ಇದರಿಂದಾಗಿ ಸಾರ್ವಜನಿಕರಿಗೆ ಯಾವುದೇ ತೊಂದರೆ ಉಂಟಾಗುತ್ತಿರುವುದಿಲ್ಲ.

**ಕಡತ ಸಂಖ್ಯೆ:** ನಅಇ 250 ಮೈಅಪ್ರಾ 2024

(**ಬಿ.ಎಸ್.ಸುರೇಶ**)
ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು.